**ದಿನಾಂಕಃ 22-06-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಏ.ಜೆ.ಕೆ ವಕೀಲರಿಂದ ಃ-**

ನಾನು ನನ್ನ ಮುಖ್ಯ ವಿಚಾರಣೆ ಪರವಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲ ವಿಷಯಗಳನ್ನು ಓದಿ, ತಿಳಿದುಕೊಂಡು ಅದಕ್ಕೆ ನನ್ನ ಸಹಿಯನ್ನು ಹಾಕಿರುತ್ತೇನೆ. ಅದರಲ್ಲಿನ ಎಲ್ಲ ಸಂಗತಿಗಳು ಸತ್ಯವಾಗಿರುತ್ತವೆ. ಅದನ್ನು ನಾನೇ ಹೇಳಿ ಬರೆಸಿರುತ್ತೇನೆ.

1. ಹೊಸನಗರ ತಾಲ್ಲೂಕು ಕೋಡೂರು ಗ್ರಾಮದ ಸರ್ವೆ ನಂ 24/1 ಎ ಗೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ 1 ಎಂದು,

2. ಎಂ. ಆರ್ ನಂ 40/1998-99 ರ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ 2 ಎಂದು,

3. ಎಂ.ಆರ್ ನಂ 9/2006-07 ರ ಮುಟೇಷನ್ ರಿಜಿಸ್ಟರ್ ನ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ 3 ಎಂದು,

4. ಎಂ.ಆರ್ ನಂ ಹೆಚ್ 20/2011-12 ರ ಮುಟೇಷನ್ ರಿಜಿಸ್ಟರ್ ನ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ 4 ಎಂದು,

5. ನಮೂನೆ 5 ಪಕ್ಕ ಪುಸ್ತಕದ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ 5 ಎಂದು,

6. ಆಕಾರ್ ಬಂದುವಿನ ದೃಡೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ 6 ಎಂದು,

7. ದಿಃ 29.01.2022 ರಂದು ನಾನು ರಿಪ್ಪನ್ ಪೇಟೆ ಪೊಲೀಸ್ ಠಾಣೆಗೆ ನೀಡಿದ ದೂರಿನ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ 7 ಎಂದು ಗುರುತಿಸಲಾಯಿತು.

ನನ್ನ ಮಾಗಣೆಯಂತೆ ದಾವೆಯನ್ನು ಡಿಕ್ರಿ ಮಾಡಲು ಕೋರುತ್ತೇನೆ .

(ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಲಾಗಿದೆ.)

(ತೆ ನ್ಯಾ  ನನ್ನ ಹೇ ಬೆ ಮಾಡಲಾಗಿದೆ)

ನನ್ನ ಸಮಕ್ಷಮ,

ಓ.ಹೇ.ಕೇ.ಸರಿ.ಇದೆ.

ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ. ಹೊಸನಗರ.